# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1440 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.03.2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿರುವ ಪೊಲೀಸ್ ಕಾನ್ಸ್‌ಟೇಬಲ್‌ಗಳ ಸಂಖ್ಯೆ ಎಷ್ಟು; | ರಾಜ್ಯ ಪೊಲೀಸ್ ಇಲಾಖೆಯಲ್ಲಿ ಒಟ್ಟು 60,493 ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳು ಮಂಜೂರಾಗಿರುತ್ತದೆ. |
| ಆ. | ನಿಯಮಾನುಸಾರ ಎಷ್ಟು ಜನರಿಗೆ ಒಬ್ಬ ಪೊಲೀಸ್ ಕಾನ್ಸ್‌ಟೇಬಲ್ ಇರಬೇಕು; | ಕೇಂದ್ರ ಗೃಹ ಮಂತ್ರಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಬ್ಯೂರೋ ಆಫ್ ಪೊಲೀಸ್ ರಿಸರ್ಚ್ & ಡೆವೆಲಪ್‌ಮೆಂಟ್ (ಬಿಪಿಆರ್ & ಡಿ)ರ ವತಿಯಿಂದ ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಪೊಲೀಸ್ ಸಂಘಟನೆಗಳ ಕುರಿತು ಭಾರತದ ಪೊಲೀಸ್ ಸಂಘಟನೆಗಳ ಕುರಿತು ಮಾಹಿತಿಯನ್ನು ಪ್ರಕಟಿಸಲಾಗುತ್ತಿದ್ದು, ಇದರನ್ವಯ 2023ನೇ ಸಾಲಿನಲ್ಲಿ ಕರ್ನಾಟಕ ರಾಜ್ಯದಲ್ಲಿ ಒಂದು ಲಕ್ಷ ಜನಸಂಖ್ಯೆಗೆ ಸುಮಾರು 165.04 ಸಂಖ್ಯೆ ಪೊಲೀಸ್ ಅಧಿಕಾರಿ / ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ. ಅಖಿಲ ಭಾರತ ಮಟ್ಟದಲ್ಲಿ ಈ ಅನುಪಾತವು ಒಂದು ಲಕ್ಷ ಜನಸಂಖ್ಯೆಗೆ 196.88 ಇರುತ್ತದೆ. |
| ಇ. | ಆ ಪ್ರಕಾರ ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು; | 1500 ಸ್ಪೆ.ಆರ್.ಪಿ.ಸಿ ಮತ್ತು 2000 ಎ.ಪಿ.ಸಿ ಹುದ್ದೆಗಳಿಗೆ ನೇಮಕಾತಿಗೆ ಅನುಮತಿ ನೀಡಲಾಗಿದೆ. ಪ್ರಸ್ತುತ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ: 25.11.2024 ರನ್ವಯ ಒಳ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ಹೊಸದಾಗಿ ಯಾವುದೇ ಅಧಿಸೂಚನೆಯನ್ನು ಹೊರಡಿಸಬಾರದೆಂದು ಸೂಚಿಸಿರುವುದರಿಂದ ನೇರ ನೇಮಕಾತಿ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸುವುದನ್ನು ಕಾಯ್ದಿರಿಸಲಾಗಿದೆ. |
| ಈ. | ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳ ನೇಮಕಾತಿಗೆ ಸರ್ಕಾರವು ಕ್ರಮ ಕೈಗೊಳ್ಳುವುದೇ? | |

ಒಇ 75 ಪಿಪಿಎಸ್ 2025

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು